**All India Radio: Bangalore**
**National Bulletin In Kannada**
**04.11.2025 19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**04.11.2025 19.35 p.m.**
*****************

**ಮುಖ್ಯಾಂಶಗಳು**

1. **ಮೊದಲ ಹಂತದ ಬಿಹಾರ ವಿಧಾನಸಭಾ ಚುನಾವಣಾ ಪ್ರಚಾರಕ್ಕೆ ಇಂದು ತೆರೆ: ವಿವಿಧ ರಾಜಕೀಯ ಪಕ್ಷಗಳ ನಾಯಕರಿಂದ ಮತದಾರರ ಸೆಳೆಯಲು ಅಂತಿಮ ಕಸರತ್ತು**
2. **ಸಮಾಜ, ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಣ ಸ್ಫೂರ್ತಿ– ರಾಷ್ಟ್ರಪತಿ ದ್ರೌಪದಿ ಮುರ್ಮು**
3. **ಗಾಜಾ ಶಾಂತಿ ಯೋಜನೆಗೆ ಭಾರತ ಬೆಂಬಲ– ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್**
4. **ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ತಂಡ ಪ್ರಕಟ: ತಂಡದಲ್ಲಿ ಸ್ಥಾನ ಪಡೆದ ಮೂವರು ಭಾರತೀಯರು**

*****************

ಮೊದಲ ಹಂತದ ಬಿಹಾರ ವಿಧಾನಸಭಾ ಚುನಾವಣೆಯ ಪ್ರಚಾರಕ್ಕೆ ಇಂದು ತೆರೆ ಬಿದ್ದಿದೆ. ಸಂಜೆ ಪ್ರಚಾರ ಕೊನೆಗೊಳ್ಳುವ ವೇಳೆಗೆ ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತದಾರರನ್ನು ಸೆಳೆಯಲು ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡಿದರು.

ಮೊದಲ ಹಂತದಲ್ಲಿ, ಇದೇ 6 ರಂದು 18 ಜಿಲ್ಲೆಗಳ 121 ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಬಿಜೆಪಿ, ಜೆಡಿಯು, ರಾಷ್ಟ್ರೀಯ ಜನತಾದಳ ಮತ್ತು ಕಾಂಗ್ರೆಸ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರಮುಖ ನಾಯಕರು ಇಂದು ಹಲವು ರಾಲಿಗಳನ್ನುದ್ದೇಶಿಸಿ ಮಾತನಾಡಿದರು.

'ಮೇರಾ ಬೂತ್ ಸಬ್ಸೆ ಮಜ್ಬೂತ್' ಕಾರ್ಯಕ್ರಮದಡಿಯಲ್ಲಿ ಇಂದು ಬಿಹಾರದ ಮಹಿಳೆಯರೊಂದಿಗೆ ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಸಂವಾದ ನಡೆಸಿದರು.

ಈ ವೇಳೆ ಅವರು, ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಭಾರಿ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿ, ಈ ಬಾರಿ ಎನ್‌ಡಿಎ ಅನ್ನು ಗೆಲ್ಲಿಸಿ, ಕಳೆದ 20 ವರ್ಷಗಳ ದಾಖಲೆಯನ್ನು ಮುರಿಯಲು ಬಿಹಾರದ ಜನರು ನಿರ್ಧರಿಸಿದ್ದಾರೆ ಎಂದು ಹೇಳಿದರು.

ದರ್ಭಾಂಗದಲ್ಲಿ ನಡೆದ ರಾಲಿಯಲ್ಲಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ, ಎನ್‌ಡಿಎ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಕೌಶಲ ವಿಕಾಸ ಕೇಂದ್ರಗಳನ್ನು ನಿರ್ಮಿಸುವುದಾಗಿ ಭರವಸೆ ನೀಡಿದರು.

ಪ್ರತಿ ಜಿಲ್ಲೆಗೂ ಹೊಸ ಕಾರ್ಖಾನೆ ಮತ್ತು ರಾಜ್ಯದಲ್ಲಿ 10 ಹೊಸ ಕೈಗಾರಿಕಾ ಉದ್ಯಾನವನಗಳನ್ನು ನಿರ್ಮಿಸಲಾಗುವುದು ಎಂದು ಅವರು ಘೋಷಿಸಿದರು.

ಬಿಜೆಪಿ ನಾಯಕ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಬಿಜೆಪಿ ಅಭ್ಯರ್ಥಿ ಪರ ಪ್ರಚಾರ ನಡೆಸಿದರು.

ಮತ್ತೊಂದೆಡೆ, ಮಹಾಘಟಬಂಧನ್‌ಗೆ ಅಪಾರ ಬೆಂಬಲ ಸಿಗುತ್ತಿದೆ ಎಂದು ಆರ್‌ಜೆಡಿ ನಾಯಕಿ ಮಿಸಾ ಭಾರ್ತಿ ಹೇಳಿದರು. ಈ ಮೈತ್ರಿಕೂಟ ಯುವಕರು, ಮಹಿಳೆಯರು, ಹಣದುಬ್ಬರ ಮತ್ತು ಉದ್ಯೋಗಗಳ ಬಗ್ಗೆ ಮಾತನಾಡುತ್ತಿದೆ ಎಂದು ಹೇಳಿದರು.

ಜೆಡಿಯು ಅಧ್ಯಕ್ಷ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್, ಸುಪೌಲ್‌ನ ತ್ರಿವೇಣಿಗಂಜ್‌ನಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡುತ್ತಾ, ಕಳೆದ 20 ವರ್ಷಗಳಲ್ಲಿ, ತಮ್ಮ ಸರ್ಕಾರ ಮಹಿಳಾ ಸಬಲೀಕರಣದ ಮೇಲೆ ವ್ಯಾಪಕವಾಗಿ ಗಮನಹರಿಸಿದೆ ಎಂದು ಹೇಳಿದರು. ಜೀವಿಕಾ ಕಾರ್ಯಕ್ರಮದಡಿಯಲ್ಲಿ 1 ಕೋಟಿ 40 ಲಕ್ಷಕ್ಕೂ ಹೆಚ್ಚು ಮಹಿಳೆಯರು ಸ್ವ-ಸಹಾಯ ಗುಂಪುಗಳೊಂದಿಗೆ ಸಂಪರ್ಕ ಹೊಂದಿದ್ದಾರೆ ಎಂದು ತಿಳಿಸಿದರು.

ಈ ನಡುವೆ ಪಾಟ್ನಾದಲ್ಲಿ, ಮಾಜಿ ಕೇಂದ್ರ ಸಚಿವೆ ಮತ್ತು ಹಿರಿಯ ಬಿಜೆಪಿ ನಾಯಕಿ ಸ್ಮೃತಿ ಇರಾನಿ, ಎನ್‌ಡಿಎ ಸರ್ಕಾರ ಮಹಿಳೆಯರಿಗೆ 10 ಸಾವಿರ ರೂಪಾಯಿಗಳನ್ನು ನೀಡುವ ಮೂಲಕ ಸಬಲೀಕರಣಗೊಳಿಸುತ್ತಿದ್ದರೆ, ರಾಷ್ಟ್ರೀಯ ಜನತಾದಳದ ಮಹಿಳಾ ವಿರೋಧಿ ಮುಖವು ಬಹಿರಂಗಗೊಂಡಿದೆ ಎಂದು ಟೀಕಿಸಿದರು.

ಮಹಾಘಟಬಂಧನದ ಮುಖ್ಯಮಂತ್ರಿ ಅಭ್ಯರ್ಥಿ ಮತ್ತು ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ಪಾಟ್ನಾದಲ್ಲಿ ಮಾತನಾಡುತ್ತಾ, ತಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ, ರೈತರು ಭತ್ತಕ್ಕೆ ಕನಿಷ್ಠ ಬೆಂಬಲ ಬೆಲೆ ಜೊತೆಗೆ ಕ್ವಿಂಟಾಲ್‌ಗೆ 300 ರೂಪಾಯಿ ಬೋನಸ್ ಮತ್ತು ಗೋಧಿಗೆ ಎಂಎಸ್‌ಪಿಯೊಂದಿಗೆ ಕ್ವಿಂಟಾಲ್‌ಗೆ 400 ರೂಪಾಯಿ ಬೋನಸ್ ಪಡೆಯಲಿದ್ದಾರೆ ಎಂದು ಘೋಷಿಸಿದರು.

ಜನ್ ಸೂರಜ್ ಸಂಸ್ಥಾಪಕ ಪ್ರಶಾಂತ್ ಕಿಶೋರ್, ಪಕ್ಷದ ಅಭ್ಯರ್ಥಿ ಪರವಾಗಿ ಅರ್‍ರಾದಲ್ಲಿ ರೋಡ್ ಶೋ ನಡೆಸಿದರು.

*****************

ಶಿಕ್ಷಣ ಕೇವಲ ಸ್ವಾವಲಂಬನೆಯ ಸಾಧನವಲ್ಲ. ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಸ್ಫೂರ್ತಿಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ.

ಉತ್ತರಾಖಂಡದ ನೈನಿತಾಲ್‌ನಲ್ಲಿರುವ ಕುಮೌನ್ ವಿಶ್ವವಿದ್ಯಾಲಯದ 20ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ತಮ್ಮ ಶಿಕ್ಷಣವನ್ನು ದುರ್ಬಲರಿಗೆ ಸೇವೆ ಸಲ್ಲಿಸಲು ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಬಳಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಮನವಿ ಮಾಡಿದರು.

ಬುದ್ಧಿಶಕ್ತಿ, ಕೌಶಲ್ಯ ಮತ್ತು ನೈತಿಕ ಮೌಲ್ಯಗಳನ್ನು ಶಿಕ್ಷಣ ಬಲಪಡಿಸುತ್ತದೆ ಎಂದು ಅವರು ಹೇಳಿದರು. ಭಾರತದ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿದೆ ಮತ್ತು ಕೇಂದ್ರ ಸರ್ಕಾರ ಯುವಜನರಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿವೆ. ಸಂಶೋಧನೆ, ನಾವೀನ್ಯತೆ ಮತ್ತು ಉದ್ಯಮಶೀಲನತೆಯನ್ನು ಉತ್ತೇಜಿಸುವಂತೆ ಅವರು ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಕರೆ ನೀಡಿದರು.

2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವುದು ಸರ್ಕಾರದ ಗುರಿಯಾಗಿದೆ. ಈ ದೃಷ್ಟಿಕೋನವನ್ನು ಸಾಧಿಸಲು ಯುವಕರು ನಿರ್ಣಾಯಕ ಪಾತ್ರವಹಿಸುತ್ತಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

*****************

ಗಾಜಾ ಶಾಂತಿ ಯೋಜನೆಯನ್ನು ಭಾರತ ಬೆಂಬಲಿಸುತ್ತದೆ. ಇದು ಶಾಶ್ವತ ಪರಿಹಾರಕ್ಕೆ ದಾರಿ ಮಾಡಿಕೊಡುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಇಸ್ರೇಲ್ ವಿದೇಶಾಂಗ ಸಚಿವ ಗಿಡಿಯಾನ್ ಸಾರ್ ಅವರೊಂದಿಗೆ ಭೇಟಿಯ ನಂತರ ಮಾತನಾಡಿದ ಅವರು, ಭಾರತ ಮತ್ತು ಇಸ್ರೇಲ್ ಎರಡೂ ರಾಷ್ಟ್ರಗಳೂ ಭಯೋತ್ಪಾದನೆಯಿಂದ ಸವಾಲನ್ನು ಎದುರಿಸುತ್ತಿವೆ. ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ವಿರುದ್ಧ ಶೂನ್ಯ ಸಹಿಷ್ಣುತೆಯ ಜಾಗತಿಕ ವಿಧಾನವನ್ನು ಖಚಿತಪಡಿಸಿಕೊಳ್ಳಲು ಉಭಯ ರಾಷ್ಟ್ರಗಳು ಕೆಲಸ ಮಾಡುವುದು ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಭಾರತ ಮತ್ತು ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆ ಹೊಂದಿವೆ. ಸಂಕಷ್ಟದ ಸಮಯದಲ್ಲಿ ಉಭಯ ರಾಷ್ಟ್ರಗಳು ಒಟ್ಟಾಗಿ ನಿಂತಿವೆ ಎಂದರು.

ಸೆಮಿಕಂಡಕ್ಟರ್ ಮತ್ತು ಸೈಬರ್ ಕ್ಷೇತ್ರದಲ್ಲಿ ಉಭಯ ದೇಶಗಳು ಸಹಕಾರ ಹೊಂದಿವೆ. ಮುಂದಿನ ವರ್ಷ ಫೆಬ್ರವರಿಯಲ್ಲಿ ನಡೆಯಲಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಇಸ್ರೇಲ್ ಉಪಸ್ಥಿತಿಯನ್ನು ಭಾರತ ಎದುರು ನೋಡುತ್ತಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ಹೇಳಿದರು.

*****************

ನವದೆಹಲಿಯಲ್ಲಿಂದು ಶ್ರೀಲಂಕಾ ಸಂಸತ್‌ನ ವಿರೋಧ ಪಕ್ಷದ ನಾಯಕ ಸಜಿತ್ ಪ್ರೇಮದಾಸ್ ಅವರನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ ಮಾಡಿ ಮಾತುಕತೆ ನಡೆಸಿದರು.

ಸಭೆಯಲ್ಲಿ ಉಭಯ ನಾಯಕರು ಶ್ರೀಲಂಕಾದ ಆರ್ಥಿಕ ಚೇತರಿಕೆ ಹಾಗೂ ದ್ವಿಪಕ್ಷೀಯ ಆರ್ಥಿಕ ಮತ್ತು ಹೂಡಿಕೆ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ಮಾರ್ಗಗಳ ಕುರಿತು ಚರ್ಚಿಸಿದರು.

ಬಿಕ್ಕಟ್ಟಿನ ಸಮಯದಲ್ಲಿ ಹಾಗೂ ಬೆಳವಣಿಗೆಯ ಪ್ರಯಾಣದ ಉದ್ದಕ್ಕೂ ಶ್ರೀಲಂಕಾದ ಜನರಿಗೆ ನೀಡಿದ ನಿರಂತರ ಬೆಂಬಲಕ್ಕಾಗಿ ಸಜಿತ್ ಪ್ರೇಮದಾಸ್ ಅವರು ಭಾರತಕ್ಕೆ ಧನ್ಯವಾದ ಸಲ್ಲಿಸಿದರು.

*****************

ಭಾರತ ಮತ್ತು ಬ್ರಿಟನ್ ನಡುವಿನ ಸಂಬಂಧ ಮತ್ತಷ್ಟು ಬಲಗೊಳಿಸಲು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಇಂದು ಲಂಡನ್ ತಲುಪಿದ್ದಾರೆ.

ಉಭಯ ದೇಶಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸಲು ಹಾಗೂ ಪ್ರಮುಖ ಕ್ಷೇತ್ರದಲ್ಲಿ ಸಹಕಾರವನ್ನು ಮುನ್ನಡೆಸುವ ನಿಟ್ಟಿನಲ್ಲಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ವಿವಿಧ ಸಭೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಕಳೆದ ವಾರ ನವದೆಹಲಿಯಲ್ಲಿ ಬ್ರಿಟನ್‌ನ ಹೈಕಮಿಷನ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಭಾಗವಹಿಸಿದ್ದರು. ಉಭಯ ದೇಶಗಳು ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಂಡಿವೆ.

*****************

ಮೆಲಿಸ್ಸಾ ಚಂಡಮಾರುತದ ಹಿನ್ನೆಲೆಯಲ್ಲಿ ಜಮೈಕಾ ಹಾಗೂ ಕ್ಯೂಬಾಗೆ ಭಾರತ ಮಾನವೀಯ ನೆರವು ನೀಡಿದೆ. ನವದೆಹಲಿಯಿಂದ ಇಂದು ಜಮೈಕಾ ಮತ್ತು ಕ್ಯೂಬಾಗೆ ತಲಾ 20 ಟನ್ ಮಾನವೀಯ ಮತ್ತು ವಿಪತ್ತು ಪರಿಹಾರ ನೆರವನ್ನು ಕಳುಹಿಸಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

ಆಹಾರ ಮತ್ತು ದೈನಂದಿನ ಅಗತ್ಯ ವಸ್ತುಗಳು, ಔಷಧಗಳು, ವೈದ್ಯಕೀಯ ಉಪಕರಣಗಳು, ವಿದ್ಯುತ್ ಜನರೇಟರ್‌ಗಳು, ನೈರ್ಮಲ್ಯ ಕಿಟ್‌ಗಳು ಸೇರಿದಂತೆ ಅಗತ್ಯ ವಸ್ತುಗಳನ್ನು ಭಾರತೀಯ ವಾಯುಪಡೆಯ ವಿಮಾನಗಳಲ್ಲಿ ಸಾಗಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

*****************

ಗುರುನಾನಕ್ ಜಯಂತಿಯ ಮುನ್ನ ದಿನವಾದ ಇಂದು ಎಲ್ಲಾ ನಾಗರಿಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭಾಶಯ ಕೋರಿದ್ದಾರೆ.

ತಮ್ಮ ಸಂದೇಶದಲ್ಲಿ ಅವರು, ಈ ಸಂದರ್ಭವು ಗುರುನಾನಕ್ ದೇವ್ ಅವರ ಆದರ್ಶಗಳು ಮತ್ತು ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಎಲ್ಲರಿಗೂ ಪ್ರೇರಣೆ ನೀಡುತ್ತದೆ ಮತ್ತು ಉತ್ತಮ ಸಮಾಜವನ್ನು ನಿರ್ಮಿಸುವತ್ತ ಎಲ್ಲರಿಗೂ ಮಾರ್ಗದರ್ಶನ ನೀಡುತ್ತದೆ ಎಂದು ಹೇಳಿದರು.

ಗುರುನಾನಕ್ ಜೀ ಅವರ ಸಂದೇಶ – ಸತ್ಯ, ನ್ಯಾಯ ಮತ್ತು ಕರುಣೆಯ ಆಧಾರದ ಮೇಲೆ ಜೀವನ ನಡೆಸುವುದು ಯಶಸ್ಸಿನ ನಿಜವಾದ ಅಳತೆ ಎಂಬುದನ್ನು ಕಲಿಸುತ್ತದೆ. ಪ್ರಮಾಣಿಕತೆಯಿಂದ ಬದುಕಲು ಮತ್ತು ಇತರರೊಂದಿಗೆ ಸಂಪನ್ಮೂಲಗಳನ್ನು ಹಂಚಿಕೊಳ್ಳಲು ಅವರು ಎಲ್ಲರಿಗೂ ಸ್ಫೂರ್ತಿ ನೀಡುತ್ತಾರೆ ಎಂದರು.

ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಗುರುನಾನಕ್ ದೇವ್ ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಹೆಚ್ಚು ಶಾಂತಿಯುತ ಮತ್ತು ಸಮೃದ್ಧ ರಾಷ್ಟ್ರವನ್ನು ನಿರ್ಮಿಸಲು ಅವರು ತೋರಿಸಿದ ಮಾರ್ಗವನ್ನು ಅನುಸರಿಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಮನವಿ ಮಾಡಿದರು.

*****************

ಛತ್ತೀಸ್‌ಗಢದ ಬಿಲಾಸ್‌ಪುರ ನಗರದ ಬಳಿ ಇಂದು ಸಂಜೆ ರೈಲು ಅಪಘಾತ ಸಂಭವಿಸಿದೆ. ಲಾಲ್‌ಖಾದನ್ ಬಳಿ ಪ್ರಯಾಣಿಕ ರೈಲು, ಸರಕು ರೈಲಿಗೆ ಡಿಕ್ಕಿ ಹೊಡೆದಿದೆ. ಈವರೆಗೆ ಸ್ಥಳದಿಂದ ನಾಲ್ಕು ಶವಗಳನ್ನು ಹೊರ ತೆಗೆಯಲಾಗಿದೆ.

ಅಪಘಾತದಲ್ಲಿ 20ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ. ಸ್ಥಳಕ್ಕೆ ರೈಲ್ವೆ, ಜಿಲ್ಲಾಡಳಿತ ಮತ್ತು ಪೊಲೀಸ್ ಅಧಿಕಾರಿಗಳು ಧಾವಿಸಿದ್ದು, ಯುದ್ಧೋಪಾದಿಯಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಲಾಗಿದೆ.

*****************

ಹಿರಿಯ ಮರಾಠಿ ನಟಿ ದಯಾ ಡೋಂಗ್ರೆ ವಯೋಸಹಜ ಅನಾರೋಗ್ಯದಿಂದ ನಿಧನರಾಗಿದ್ದಾರೆ. ಅವರಿಗೆ 85 ವರ್ಷ ವಯಸ್ಸಾಗಿತ್ತು.  ಆರಂಭದಲ್ಲಿ ಸಂಗೀತದತ್ತ ಒಲವು ಹೊಂದಿದ್ದ ದಯಾ, ಆಲ್ ಇಂಡಿಯಾ ರೇಡಿಯೊ ಗಾಯನ ಸ್ಪರ್ಧೆಯಲ್ಲಿ ಗೆದ್ದ ನಂತರ ಆರಂಭಿಕ ಮನ್ನಣೆ ಪಡೆದರು.

ನಂತರ ಅವರು ನಟನೆಯತ್ತ ಮುಖ ಮಾಡಿದರು. ರಾಷ್ಟ್ರೀಯ ನಾಟಕ ಶಾಲೆಯಲ್ಲಿ ಅಧ್ಯಯನ ಮಾಡಿದರು. ಅನೇಕ ಮರಾಠಿ ಸಿನಿಮಾಗಳು ಮತ್ತು ಧಾರವಾಹಿಗಳಲ್ಲಿ ಅಭಿನಯಕ್ಕಾಗಿ ಮೆಚ್ಚುಗೆ ಗಳಿಸಿದರು. ಮರಾಠಿ ರಂಗಭೂಮಿ ಮತ್ತು ಚಲನಚಿತ್ರಗಳಲ್ಲಿ ದಯಾ ಡೋಂಗ್ರೆ ಖ್ಯಾತರಾದರು.

*****************

ದಕ್ಷಿಣಾ ಆಫ್ರಿಕಾ ವಿರುದ್ಧ ಭಾರತ ಐತಿಹಾಸಿಕ ಪ್ರಶಸ್ತಿ ಗೆದ್ದ ನಂತರ ಮಹಿಳಾ ವಿಶ್ವಕಪ್ ಕ್ರಿಕೆಟ್ ತಂಡವನ್ನು ಐಸಿಸಿ ಪ್ರಕಟಿಸಿದೆ. ಇದರಲ್ಲಿ ಮೂವರು ಭಾರತೀಯ ತಾರೆಯರಾದ ಸ್ಮೃತಿ ಮಂಧಾನ, ಜೆಮಿಮಾ ರೊಡ್ರಿಗಸ್ ಮತ್ತು ದೀಪ್ತಿ ಶರ್ಮಾ ಇದ್ದಾರೆ.

ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾರತ ತಂಡದ ಉಪನಾಯಕಿ ಸ್ಮೃತಿ ಮಂಧಾನ, ನ್ಯೂಜಿಲೆಂಡ್ ವಿರುದ್ಧ ಅದ್ಭುತ ಶತಕ ಸೇರಿದಂತೆ 54.25 ಸರಾಸರಿಯಲ್ಲಿ 434 ರನ್ ಗಳಿಸಿದರು. ಜೆಮಿಮಾ ರೊಡ್ರಿಗಸ್ ಅತ್ಯುತ್ತಮ ಬ್ಯಾಟಿಂಗ್ ಮೂಲಕ 58.4 ಸರಾಸರಿಯಲ್ಲಿ 292 ರನ್ ಗಳಿಸಿದರು. ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಅಜೇಯ 127 ರನ್ ಗಳಿಸುವ ಮೂಲಕ ಪಂದ್ಯದ ಗೆಲುವಿಗೆ ಪ್ರಮುಖ ಕಾರಣರಾದರು.

ದೀಪ್ತಿ ಶರ್ಮಾ ನಿರ್ಣಾಯಕ 215 ರನ್‌ಗಳ ಜೊತೆಗೆ 22 ವಿಕೆಟ್‌ಗಳನ್ನು ಪಡೆದು ವಿವಿಧ ಪಂದ್ಯಗಳಲ್ಲಿ ತಂಡ ಗೆಲ್ಲಲು ಕೊಡುಗೆ ನೀಡಿದರು.

*****************